ಕರ್ನಾಟಕ ಸರ್ಕಾರ

# ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

## ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್

No :RDPR/SWSM/TSC/32/2012-13 ದಿನಾಂಕ: 18-10-2012

**ಸುತ್ತೋಲೆ**

**ವಿಷಯ: ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸ್ವಚ್ಛತಾ ಧೂತರು, ಭಾರತ್ ನಿರ್ಮಾಣ ಸ್ವಯಂ ಸೇವಕರು ಹಾಗೂ ಸ್ವಸಹಾಯ ಸಂಘಗಳ ಮಹಿಳೆಯರ ಸಹಕಾರದೊಂದಿಗೆ ನಿರ್ಮಲ ಭಾರತ್ ಅಭಿಯಾನ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ಕುರಿತು**

- - -

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಗ್ರಾಮೀಣ ಪ್ರದೇಶದಲ್ಲಿ ನೈರ್ಮಲ್ಯ ಸೌಲಭ್ಯಗಳನ್ನು ಒದಗಿಸುವ ಮಹತ್ವದ ಉದ್ದೇಶದೊಂದಿಗೆ ನಿರ್ಮಲ ಭಾರತ ಅಭಿಯಾನ ಕಾರ್ಯಕ್ರಮವನ್ನು ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಅನುಷ್ಠಾನಗೊಳಸಲಾಗುತ್ತಿದೆ. 2005 ರ ಅಕ್ಟೋಬರ್ 2 ರಿಂದ ಜಾರಿಯಲ್ಲಿದ್ದ ಸಂಪೂರ್ಣ ಸ್ವಚ್ಛತಾ ಆಂದೋಲನ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರವು ಏಪ್ರಿಲ್-2012ರಿಂದ "ನಿರ್ಮಲ ಭಾರತ ಅಭಿಯಾನ" ಎಂದು ಮರುನಾಮಕರಣ ಮಾಡಿ ಯೋಜನೆಯ ಮಾರ್ಗಸೂಚಿಯನ್ನು ಪರಿಷ್ಕರಣೆ ಮಾಡಿರುತ್ತದೆ. ಪರಿಷ್ಕೃತ ಮಾರ್ಗಸೂಚಿಯಂತೆ ವೈಯಕ್ತಿಕ ಶೌಚಾಲಯಗಳಿಗೆ ನೀಡಲಾಗುತ್ತಿದ್ದ ಪ್ರೋತ್ಸಾಹಧನವನ್ನು ರೂ.3700/- ರಿಂದ ರೂ.4700/- ಕ್ಕೆ ಹೆಚ್ಚಿಸಲಾಗಿದೆ. ಈವರಗೆ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ ಮಾತ್ರ ನೀಡಲಾಗುತ್ತಿದ್ದ ಪ್ರೋತ್ಸಾಹಧನವನ್ನು ಬಡತನ ರೇಖೆಗಿಂತ ಮೇಲಿನ ಕುಟುಂಬಗಳಾದ ಸಣ್ಣ ಹಾಗೂ ಅತಿಸಣ್ಣ ರೈತರು, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕುಟುಂಬಗಳು, ಭೂರಹಿತ ಕಾರ್ಮಿಕರು, ಅಂಗವಿಕಲರು ಹಾಗೂ ಮಹಿಳಾ ಮುಖ್ಯಸ್ಥ ಕುಟುಂಬಗಳಿಗೂ ವಿಸ್ತರಿಸಲಾಗಿದೆ. ಜೊತೆಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಅಡಿಯಲ್ಲಿ ಕೌಟುಂಬಿಕ ಶೌಚಾಲಯ ನಿರ್ಮಾಣಕ್ಕೆ 26 ಮಾನವ ದಿನಗಳ ಕೂಲಿ ಗರಿಷ್ಠ ರೂ.4500/- ನ್ನು ಒದಗಿಸಿರುತ್ತದೆ.

ಈ ಎಲ್ಲ ಸೌಲಭ್ಯಗಳ ಕುರಿತು ಗ್ರಾಮೀಣ ಜನರಿಗೆ ಮಾಹಿತಿ ನೀಡಿ, ಶೌಚಾಲಯ ನಿರ್ಮಿಸಿಕೊಳ್ಳುವಂತೆ ಪ್ರೇರಣೆ ನೀಡುವುದು ಅತ್ಯಂತ ಅವಶ್ಯವಿರುತ್ತದೆ. **ಈ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಗ್ರಾಮೀಣ ಜನಸಮುದಾಯದೊಂದಿಗೆ ಉತ್ತಮ ಸಂಪರ್ಕವನ್ನು ಹೊಂದಿರುವ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಸ್ವಚ್ಛತಾ ಧೂತರು, ಭಾರತ್ ನಿರ್ಮಾಣ ಸ್ವಯಂ ಸೇವಕರು ಹಾಗೂ ಸ್ವಸಹಾಯ ಸಂಘಗಳ ಮಹಿಳೆಯರ ಸೇವೆಯನ್ನು ಗ್ರಾಮೀಣ ಜನರು ಶೌಚಾಲಯ ನಿರ್ಮಿಸಿಕೊಂಡು ಬಳಕೆ ಮಾಡುವಂತೆ ಪ್ರೇರೇಪಿಸಲು ಬಳಸಿಕೊಳ್ಳಬಹುದಾಗಿದೆ.**

ಈ ರೀತಿ ಶೌಚಾಲಯ ನಿರ್ಮಿಸಲು ಪ್ರೇರಕರಾಗಿ ಕಾರ್ಯನಿರ್ವಹಿಸುವ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸ್ವಚ್ಛತಾ ಧೂತರು, ಭಾರತ್ ನಿರ್ಮಾಣ ಸ್ವಯಂ ಸೇವಕರು ಹಾಗೂ ಸ್ವಸಹಾಯ ಸಂಘಗಳ ಮಹಿಳೆಯರಿಗೆ ಪ್ರತಿ ಕೌಟುಂಬಿಕ ಶೌಚಾಲಯಕ್ಕೆ ರೂ.75/-ರಂತೆ ಪ್ರೋತ್ಸಾಹಧನ ನೀಡಬಹುದಾಗಿದೆ. ಈ ಪ್ರೋತ್ಸಾಹ ಧನವನ್ನು ನಿರ್ಮಲ ಭಾರತ್ ಅಭಿಯಾನದ ಐ.ಇ.ಸಿ ಚಟುವಟಿಕೆಗಳ ಅನುದಾನದ ಅಡಿಯಲ್ಲಿ ಭರಿಸಬಹುದಾಗಿದ್ದು, ಇದರ ಸದುಪಯೋಗವನ್ನು ಪಡೆದುಕೊಂಡು ಗ್ರಾಮೀಣ ಪ್ರದೇಶಗಳಲ್ಲಿ ಶೌಚಾಲಯ ಪ್ರಗತಿಯನ್ನು ತೀವ್ರಗತಿಯಲ್ಲಿ ಸಾಧಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದೆ.

(ಡಾ|| ಇ.ವಿ.ರಮಣ ರೆಡ್ಡಿ)
ಸರ್ಕಾರದ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:-**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಎಲ್ಲಾ ಜಿಲ್ಲಾ ಪಂಚಾಯತ್‌ಗಳು

3ನೇ ಮಹಡಿ, 3ನೇ ದ್ವಾರ, ಬಹು ಮಹಡಿ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು - 560 001.
ದೂರವಾಣಿ ಸಂ. : 22340752 ಫ್ಯಾಕ್ಸ್ :22340751 E-mail : wsrdpr@gmail.com